77

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕಿಶೋರ್ ಕುಮಾರ್ ಪುತ್ತೂರು ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ ಮೇಲಿನ ಹೇಳಿಕೆ.**

**ಸೂಚನೆ:**

ದಕ್ಷಿಣಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕೆದಂಬಾಡಿಯಲ್ಲಿ ಸಮಗ್ರ ಘನ ತ್ಯಾಜ್ಯ ನಿರ್ವಹಣಾ ಕೇಂದ್ರವನ್ನು ಆರಂಭಿಸಲಾಗಿದ್ದು ಸದರಿ ಕೇಂದ್ರಕ್ಕೆ ಪುತ್ತೂರು, ಸುಳ್ಯ ಮತ್ತು ಕಡಬ ತಾಲ್ಲೂಕಿನ ಸುಮಾರು 68 ಗ್ರಾಮ ಪಂಚಾಯತಿಗಳ ಘನ ತ್ಯಾಜ್ಯ ವಿಲೇವಾರಿ ಘಟಕದಿಂದ ಒಣಕಸವನ್ನು ಸಂಗ್ರಹಿಸುತ್ತಿದೆ. ಪ್ರತಿದಿನ ಸುಮಾರು 10 ಟನ್ ಕಸ ಸಂಗ್ರಹವಾಗುತ್ತಿದ್ದು ಈ ಸಮಗ್ರ ಘನ ತ್ಯಾಜ್ಯ ನಿರ್ವಹಣಾ ಕೆಂದ್ರದ ಸಾಮರ್ಥ್ಯ 03 ಟನ್ ಆಗಿರುವ ಕಾರಣ, ಈ ಮೇಲ್ಕಾಣಿಸಿದ ಗ್ರಾಮ ಪಂಚಾಯಿತಿಗಳ ಘನ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಒಣಕಸ ತುಂಬಿಹೋಗಿ ಸಮಸ್ಯೆಯಾಗಿದ್ದು, ಸದರಿ ಸುಳ್ಯ ಮತ್ತು ಕಡಬ ತಾಲೂಕಿಗೆ ಪ್ರತ್ಯೇಕವಾಗಿ ಸುಳ್ಯ ಅಥವಾ ಕಡಬ ತಾಲ್ಲೂಕಿನ ವ್ಯಾಪ್ತಿಯಲ್ಲಿ ಹೊಸದಾಗಿ ಸಮಗ್ರ ಘನ ತ್ಯಾಜ್ಯ ನಿರ್ವಹಣಾ ಕೇಂದ್ರ ನಿರ್ಮಿಸಲು ಕ್ರಮವಹಿಸುವ ಬಗ್ಗೆ.

**ಹೇಳಿಕೆ:**

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು, ಕಡಬ ಮತ್ತು ಸುಳ್ಯ ತಾಲ್ಲೂಕುಗಳ 68 ಗ್ರಾಮ ಪಂಚಾಯಿತಿಗಳಲ್ಲಿಉತ್ಪತ್ತಿಯಾಗುವ ಒಣಕಸವನ್ನು ನಿರ್ವಹಿಸಲು, ಪುತ್ತೂರು ತಾಲ್ಲೂಕಿನ ಕೆದಂಬಾಡಿಯಲ್ಲಿ ಸಮಗ್ರ ಘನ ತ್ಯಾಜ್ಯ ನಿರ್ವಹಣಾ ಕೇಂದ್ರವನ್ನು ನಿರ್ಮಿಸಲಾಗಿದ್ದು, ಪ್ರಸ್ತುತ ಈ ಘಟಕದಲ್ಲಿ ಪ್ರತಿದಿನ 4.5 ಟನ್ ಒಣತ್ಯಾಜ್ಯವನ್ನು ನಿರ್ವಹಿಸಲಾಗುತ್ತಿದೆ.

ಸದರಿ ಸಮಗ್ರ ಘನ ತ್ಯಾಜ್ಯ ನಿರ್ವಹಣಾ ಕೇಂದ್ರದಲ್ಲಿ ನಿರ್ವಹಿಸಲಾಗದೇ ಹೆಚ್ಚುವರಿಯಾಗಿ ಗ್ರಾಮ ಪಂಚಾಯಿತಿಗಳ ಘನ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಶೇಖರಣೆಯಾಗಿರುವ ಒಣತ್ಯಾಜ್ಯವನ್ನು ಬಂಟ್ವಾಳ ತಾಲ್ಲೂಕಿನ ನರಿಕೊಂಬು ಮತ್ತು ಮಂಗಳೂರು ತಾಲ್ಲೂಕಿನ ಎಡಪದವು ಸಮಗ್ರ ಘನ ತ್ಯಾಜ್ಯ ನಿರ್ವಹಣಾ ಕೇಂದ್ರಗಳಿಗೆ ರವಾನಿಸಿ ನಿರ್ವಹಣೆಯನ್ನು ಮಾಡಲಾಗುತ್ತಿದೆ.

ಕಡಬ ಮತ್ತು ಸುಳ್ಯ ತಾಲ್ಲೂಕುಗಳಲ್ಲಿ ಸಂಗ್ರಹಗೊಳ್ಳುವ ಒಣತ್ಯಾಜ್ಯವನ್ನು ನಿರ್ವಹಿಸಲು ಅನುಕೂಲವಾಗುವಂತೆ ಪ್ರತ್ಯೇಕವಾಗಿ ಸಮಗ್ರ ಘನ ತ್ಯಾಜ್ಯ ನಿರ್ವಹಣಾ ಕೇಂದ್ರವನ್ನು 'ವಿಶ್ವಬ್ಯಾಂಕ್' ಸಹಾಯದೊಂದಿಗೆ ಅನುಷ್ಠಾನವಾಗುತ್ತಿರುವ "K-SHORE" ಯೋಜನೆಯಡಿ ನಿರ್ಮಿಸಲು ವಿಸ್ತೃತಾ ಯೋಜನಾ ವರದಿ (DPR) ಸಿದ್ಧತಾ ಹಂತದಲ್ಲಿದೆ.

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು